ಕರ್ನಾಟಕ ಸರ್ಕಾರ

# ಆಯುಕ್ತರ ಕಛೇರಿ ಶಾಲಾ ಶಿಕ್ಷಣ ಇಲಾಖೆ ನೃಪತುಂಗ ರಸ್ತೆ, ಬೆಂಗಳೂರು-01

ಸಂಖ್ಯೆ: ಸಿ4(8) ವಾ.ಕ್ರಿ.ಯೋ. ಅನುಷ್ಠಾನ 01/2023-24 ದಿನಾಂಕ: 28.03.2024

## ಸುತ್ತೋಲೆ

**ವಿಷಯ**:- ರಾಜ್ಯ ಪಠ್ಯಕ್ರಮದ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಪ್ರಾಥಮಿಕ ಪ್ರೌಢ ಶಾಲೆಗಳಿಗೆ 2024-25ನೇ ಸಾಲಿನ ವಾರ್ಷಿಕ ಶೈಕ್ಷಣಿಕ ಚಟುವಟಿಕೆಗಳ ಕ್ರಿಯಾ ಯೋಜನೆ / ಮಾರ್ಗಸೂಚಿ ಅನುಷ್ಠಾನಗೊಳಿಸುವ ಕುರಿತು

**ಉಲ್ಲೇಖ** : ಈ ಕಛೇರಿ ಸುತ್ತೋಲೆ ಪತ್ರ ಸಂಖ್ಯೆ ಎಡಿಎಂ 2(4) ವಾ.ಕ್ರಿ.ಯೋ. 23-24 ಅನುಷ್ಠಾನ 01/2022-23 ದಿನಾಂಕ : 30.03.2023

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2023-24ನೇ ಶೈಕ್ಷಣಿಕ ಸಾಲಿನ ಚಟುವಟಿಕೆಗಳು ಮುಕ್ತಾಯವಾಗುತ್ತಿದ್ದು, ಮುಂದಿನ 2024-25ನೇ ಸಾಲಿನ ಶೈಕ್ಷಣಿಕ ಚಟುವಟಿಕೆಗಳು ಪ್ರಾರಂಭವಾಗುವುದರಿಂದ ರಾಜ್ಯಾದ್ಯಂತ ಶಾಲೆಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಏಕರೂಪದ ಅನುಷ್ಠಾನಕ್ಕಾಗಿ ವಾರ್ಷಿಕ ಶೈಕ್ಷಣಿಕ ಚಟುವಟಿಕೆಗಳ ಕ್ರಿಯಾಯೋಜನೆ/ಮಾರ್ಗಸೂಚಿಯನ್ನು ಸಿದ್ಧಪಡಿಸಲಾಗಿದೆ. ಸದರಿ ಮಾರ್ಗಸೂಚಿಯಲ್ಲಿ ವಾರ್ಷಿಕ/ಮಾಹೆವಾರು ಪಾಠ ಹಂಚಿಕೆ, ಪಠ್ಯೇತರ ಚಟುವಟಿಕೆಗಳು, ಗುಣಮಟ್ಟದ ಶಿಕ್ಷಣಕ್ಕಾಗಿ ಫಲಿತಾಂಶಮುಖಿ ಚಟುವಟಿಕೆಗಳು, ಸಂಭ್ರಮ ಶನಿವಾರ (ನೋ ಬ್ಯಾಗ್ ಡೇ) ಆಯೋಜನೆಗೆ ಪೂರಕವಾದ ಪಠ್ಯಾಧಾರಿತ ಚಟುವಟಿಕೆ ಬ್ಯಾಂಕ್ ನಿರ್ವಹಣೆ ಹಾಗೂ ವಿವಿಧ ಶಾಲಾ ಹಂತದ CCE (ಪರೀಕ್ಷೆಗಳು/ ಮೌಲ್ಯಂಕನ,ವಿಶ್ಲೇಷಣೆ) ಚಟುವಟಿಕೆಗಳನ್ನು ನಿರ್ವಹಿಸಲು ಸಹಾಯವಾಗುವಂತೆ ಯೋಜಿಸಿ, ಸಿದ್ಧಪಡಿಸಲಾಗಿದೆ.

ಪ್ರಸಕ್ತ ಸಾಲಿನಲ್ಲಿ ಎಂದಿನಂತೆ ಅಗತ್ಯ ಪೂರ್ವಸಿದ್ಧತೆಗಾಗಿ ದಿನಾಂಕ: 29.05.2024 ರಿಂದ ಶಾಲೆ ಪ್ರಾರಂಭಿಸಲು ಸೂಚಿಸಲಾಗಿದೆ. ಅದರಂತೆ ವಾರ್ಷಿಕ ಶೈಕ್ಷಣಿಕ ಕ್ರಿಯಾಯೋಜನೆಯ ವೇಳಾಪಟ್ಟಿಯನ್ನು ನಿಗದಿಪಡಿಸಲಾಗಿದೆ. ಪ್ರಯುಕ್ತ ರಾಜ್ಯದ ಎಲ್ಲಾ ಸರ್ಕಾರಿ ಅನುದಾನಿತ ಮತ್ತು ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ 2024-25ನೇ ಶೈಕ್ಷಣಿಕ ಸಾಲಿನಲ್ಲಿ ಏಕರೂಪದ ಶೈಕ್ಷಣಿಕ ಚಟುವಟಿಕೆಗಳನ್ನು ಅನುಷ್ಠಾನಗೊಳಿಸಲು ಸಹಾಯವಾಗುವಂತೆ ಒಟ್ಟು ವಾರ್ಷಿಕ ದಿನಗಳಲ್ಲಿ ಲಭ್ಯವಾಗುವ ಶೈಕ್ಷಣಿಕ ಚಟುವಟಿಕೆ ಅವಧಿಗಳು, ರಜಾ ದಿನಗಳನ್ನಾಧರಿಸಿ ಅದಕ್ಕನುಗುಣವಾಗಿ ವಾರ್ಷಿಕ ಕಾರ್ಯಸೂಚಿಯನ್ನು ಈ ಕೆಳಕಂಡಂತೆ ನಿಗದಿಪಡಿಸಲಾಗಿದ್ದು, ರಾಜ್ಯ ಪಠ್ಯಕ್ರಮದ ಎಲ್ಲಾ ಶಾಲೆಗಳಲ್ಲಿ ಅನುಷ್ಠಾನಗೊಳಿಸಿ ಮತ್ತು ಅನುಪಾಲನೆ ಮಾಡಲು ಸೂಚಿಸಿದೆ.

### 2024-25ನೇ ಸಾಲಿನ ಶಾಲಾ ಕರ್ತವ್ಯದ ದಿನಗಳು

| | |
|---|---|
| ಮೊದಲನೇ ಅವಧಿ | ದಿನಾಂಕ: 29-05-2024 ರಿಂದ ದಿನಾಂಕ: 02-10-2024 ರ ವರೆಗೆ |
| ಎರಡನೇ ಅವಧಿ | ದಿನಾಂಕ: 21-10-2024 ರಿಂದ ದಿನಾಂಕ: 10-04-2025 ರ ವರೆಗೆ |

### 2024-25ನೇ ಸಾಲಿನ ರಜಾ ದಿನಗಳು

| | |
|---|---|
| ದಸರಾ ರಜೆ | ದಿನಾಂಕ: 03-10 -2024 ರಿಂದ ದಿನಾಂಕ: 20-10-2024 ರ ವರೆಗೆ |
| ಬೇಸಿಗೆ ರಜೆ | ದಿನಾಂಕ: 11-04-2025 ರಿಂದ ದಿನಾಂಕ: 28-05-2025 ರ ವರೆಗೆ |

.............2

Scanned with ACE Scanner

## 2024-25 ನೇ ಶೈಕ್ಷಣಿಕ ಸಾಲಿಗೆ ಶಾಲಾ ಕರ್ತವ್ಯದ ದಿನಗಳು ಮತ್ತು ರಜಾ ದಿನಗಳ ವಿವರ

| ಕ್ರ ಸಂ | ತಿಂಗಳು ಮತ್ತು ವರ್ಷ | ಲಭ್ಯವಿರುವ ತಿಂಗಳಿನ ಒಟ್ಟು ದಿನಗಳು | ಒಟ್ಟು ರಜಾ ದಿನಗಳು | ಲಭ್ಯವಿರುವ ಶಾಲಾ ಕರ್ತವ್ಯದ ದಿನಗಳು |
|---|---|---|---|---|
| 1 | ಮೇ-2024 | 31 | 28 | 03 |
| 2 | ಜೂನ್ -2024 | 30 | 06 | 24 |
| 3 | ಜುಲೈ-2024 | 31 | 05 | 26 |
| 4 | ಆಗಸ್ಟ-2024 | 31 | 05 | 26 |
| 5 | ಸೆಪ್ಟಂಬರ್-2024 | 30 | 07 | 23 |
| 6 | ಅಕ್ಟೋಬರ್-2024 | 31 | 20 | 11 |
| 7 | ನವೆಂಬರ್-2024 | 30 | 07 | 23 |
| 8 | ಡಿಸೆಂಬರ್-2024 | 31 | 06 | 25 |
| 9 | ಜನವರಿ-2025 | 31 | 05 | 26 |
| 10 | ಫೆಬ್ರುವರಿ-2025 | 28 | 05 | 23 |
| 11 | ಮಾರ್ಚ್ -2025 | 31 | 06 | 25 |
| 12 | ಏಪ್ರಿಲ್-2025 | 30 | 21 | 09 |
| | | **365** | **121** | **244** |

## <u>ಒಟ್ಟು ಶಾಲಾ ಕರ್ತವ್ಯದ ದಿನಗಳ ನಿರ್ವಹಣಾ ವಿವರ</u>

| | | |
|---|---|---|
| 1 | 2024–25ನೇ ಶೈಕ್ಷಣಿಕ ಸಾಲಿಗೆ ಲಭ್ಯವಾಗುವ ಒಟ್ಟು ಶಾಲಾ ಕರ್ತವ್ಯದ ದಿನಗಳು | 244 |
| 2 | ಪರೀಕ್ಷೆಗಳು ಮತ್ತು ಮೌಲ್ಯಾಂಕನ ಕಾರ್ಯಕ್ಕಾಗಿ (FA & SA) | 26 |
| 3 | ಪಠ್ಯೇತರ ಚಟುವಟಿಕೆಗಳ/ಪಠ್ಯ ಚಟುವಟಿಕೆಗಳ/ಸ್ಪರ್ಧೆಗಳ ನಿರ್ವಹಣಾ ಕಾರ್ಯಕ್ಕಾಗಿ | 24 |
| 4 | ಮೌಲ್ಯಮಾಪನಾ ಮತ್ತು ಫಲಿತಾಂಶ ವಿಶ್ಲೇಷಣೆ ಕಾರ್ಯಕ್ಕಾಗಿ | 10 |
| 5 | ಶಾಲಾ ಸ್ಥಳೀಯ ರಜೆಗಳು | 04 |
| 6 | ಬೋಧನಾ-ಕಲಿಕಾ ಪ್ರಕ್ರಿಯೆಗೆ ಉಳಿಯುವ ಕರ್ತವ್ಯದ ದಿನಗಳು | 180 |

**<u>ವಿಶೇಷ ಸೂಚನೆಗಳು:</u>**

**A. 2023-24 ನೇ ಶೈಕ್ಷಣಿಕ ಸಾಲಿನ ಮುಕ್ತಾಯ ಹಂತದಲ್ಲಿ ನಿರ್ವಹಿಸಬೇಕಾದ ಅಂಶಗಳ ಕುರಿತು**

1. 5 , 8 ಮತ್ತು 9 ನೇ ತರಗತಿಯ SA-2 ಮೌಲ್ಯಾಂಕನ ಸೇರಿದಂತೆ ಉಳಿದ 1 ರಿಂದ 9 ನೇ ತರಗತಿಗಳ ಫಲಿತಾಂಶವನ್ನು ನಿಯಮಾನುಸಾರ ವಿಶ್ಲೇಷಿಸಿ, ನಿಗದಿಪಡಿಸಿದಂತೆ ದಿನಾಂಕ : 08.04.2024 ರಂದು ಪ್ರಾಥಮಿಕ ಶಾಲಾ ಹಂತದಲ್ಲಿ ಮತ್ತು ದಿನಾಂಕ:10.04.2024ರಂದು ಪ್ರೌಢಶಾಲಾ ಹಂತದಲ್ಲಿ ಎರಡನೇ ಸಮುದಾಯ ದತ್ತ ಶಾಲೆ/ಪೋಷಕರ ಸಭೆ ಕರೆದು ಪ್ರಕಟಣೆ ಮಾಡುವುದು.

............3

Scanned with ACE Scanner

2. ಶಾಲಾ ಸ್ಥಳೀಯ ರಜೆಗಳಿಗೆ ಸಂಬಂಧಿಸಿದಂತೆ ಶಾಲಾವಾರು ನಿರ್ದಿಷ್ಟಪಡಿಸಿದ ದಿನಾಂಕಗಳನ್ನು ಕ್ಷೇತ್ರಶಿಕ್ಷಣಾಧಿಕಾರಿಗಳು ಪೂರ್ವಭಾವಿಯಾಗಿ ಜೂನ್-2024 ರ ಮೊದಲನೇ ವಾರದಲ್ಲಿ ಅನುಮೋದನೆ ನೀಡುವುದು. ಅನುಮೋದಿಸಿದ ದಿನಾಂಕಗಳಿಗೆ ಮಾತ್ರ ಸ್ಥಳೀಯ ರಜೆ ಹೊಂದುವುದು.
3. ಉಲ್ಲೇಖಿತ ಪತ್ರದಲ್ಲಿ ಈಗಾಗಾಲೇ ನಿಗದಿಪಡಿಸಿದಂತೆ 10-04-2024ಕ್ಕೆ ಪ್ರಸಕ್ತ ಶೈಕ್ಷಣಿಕ ಸಾಲು ಮುಕ್ತಾಯವಾಗುತ್ತಿದ್ದು, 1 ರಿಂದ 9ನೇ ತರಗತಿವರೆಗೆ ಮೌಲ್ಯಾಂಕನ ಪರೀಕ್ಷೆಗಳನ್ನು ಪೂರ್ಣಗೊಳಿಸಿದ್ದು, ಅದರ ಮೌಲ್ಯಮಾಪನವನ್ನು ಪೂರ್ಣಗೊಳಿಸಿ ಫಲಿತಾಂಶವನ್ನು ಶೇ 100 ಅಂಕಗಳಿಗೆ ಕ್ರೋಢೀಕರಿಸಿ, ನಿಯಮಾನುಸಾರ ಗ್ರೇಡ್ ದಾಖಲಿಸಿ SATS ನಲ್ಲಿ ದಿನಾಂಕ : 25.04.2024 ರೊಳಗಾಗಿ ಇಂದೀಕರಿಸತಕ್ಕದ್ದು.
4. ದಿನಾಂಕ : 14-04-2024 ರಂದು ಡಾ|| ಬಿ.ಆರ್ ಅಂಬೇಡ್ಕರ್ ರವರ ಜಯಂತಿಯನ್ನು ಎಲ್ಲಾ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಮುಖ್ಯ ಶಿಕ್ಷಕರು, ಸಹ ಶಿಕ್ಷಕರು, ಹಾಗೂ ಎಸ್.ಡಿ.ಎಂ.ಸಿ/ ಖಾಸಗಿ ಶಾಲೆಗಳಲ್ಲಿ ಸಂಬಂಧಿಸಿದ ಆಡಳಿತ ಮಂಡಳಿಯವರು ಮತ್ತು ಮಕ್ಕಳೊಂದಿಗೆ ಉತ್ತಮ ಪೂರ್ವ ತಯಾರಿಯೊಂದಿಗೆ ಪ್ರಸ್ತುತ ಚಾಲ್ತಿ ಇರುವ ಲೋಕಸಭಾ ಚುನಾವಣಾ ಮಾರ್ಗೂಚಿಯಂತೆ ಆಚರಿಸತಕ್ಕದ್ದು.
5. 2024-25 ನೇ ಸಾಲಿಗೆ ಸರ್ಕಾರಿ ಶಾಲೆಗಳ 1 ರಿಂದ 10ನೇ ತರಗತಿಯ ಎಲ್ಲಾ ಮಕ್ಕಳಿಗೆ ಎರಡು ಜೊತೆ ಉಚಿತ ಸಮವಸ್ತ್ರ ಮತ್ತು ಪಠ್ಯಪುಸ್ತಕ ಹಾಗೂ ಖಾಸಗಿ ಶಾಲೆಗಳಿಗೆ ಪಠ್ಯಪುಸ್ತಕಗಳು ಈಗಾಗಲೇ ಸಂಬಂಧಿಸಿದ ತಾಲ್ಲೂಕುಗಳಿಗೆ ಸರಬರಾಜು ಆಗುತ್ತಿದ್ದು, ಇವುಗಳನ್ನು ಮೊದಲನೇ ಹಂತದಲ್ಲಿ ದಿನಾಂಕ: 10-04-2024 ರೊಳಗೆ ಸಂಬಂಧಿಸಿದ ಶಾಲೆಗಳ ಮುಖ್ಯೋಪಾಧ್ಯಾಯರ ಮುಖಾಂತರ ಮಕ್ಕಳಿಗೆ ತಲುಪಿಸತಕ್ಕದ್ದು. ತದನಂತರ ಹಂತ ಹಂತವಾಗಿ ಮಕ್ಕಳಿಗೆ ತಲುಪಿಸಿ ಶಾಲಾ ಪ್ರಾರಂಭೋತ್ಸವದಂದು ಮಕ್ಕಳು ಸಮವಸ್ತ್ರ ಧರಿಸಿ ಪಠ್ಯಪುಸ್ತಕಗಳೊಂದಿಗೆ ಶಾಲೆಗೆ ಹಾಜರಾಗಲು ಕ್ರಮವಹಿಸುವುದು.
6. ದಿನಾಂಕ : 11-04-2024 ರಿಂದ ದಿನಾಂಕ : 28-05-2024ರ ವರೆಗೆ ಶಾಲೆಗಳಿಗೆ ಬೇಸಿಗೆ ರಜೆ ಘೋಷಣೆಯಾಗಿರುವುದರಿಂದ ಶಾಲಾ ಮುಖ್ಯಸ್ಥರು ಶಾಲಾ ದಾಸ್ತಾನು ಮತ್ತು ದಾಖಲೆಗಳನ್ನು ಹಾಗೂ ಅಕ್ಷರ ದಾಸೋಹ ಕಾರ್ಯಕ್ರಮದಡಿ ಮಧ್ಯಾಹ್ನದ ಬಿಸಿಯೂಟದ ಸಾಮಗ್ರಿಗಳನ್ನು ಸುರಕ್ಷಿತವಾಗಿ ಸಂಗ್ರಹಿಸಿಡುವುದು ಹಾಗೂ ಲೋಕಸಭಾ ಚುನಾವಣಾ ಕಾರ್ಯಕ್ಕೆ ಮತಗಟ್ಟೆ ಕೇಂದ್ರಗಳನ್ನಾಗಿ ಶಾಲೆಗಳನ್ನು ಬಳಸುವುದರಿಂದ ಸಹಕರಿಸಲು ಸೂಚಿಸಿದೆ.

**B. 2024-25ನೇ ಶೈಕ್ಷಣಿಕ ಸಾಲಿನಲ್ಲಿ ನಿರ್ವಹಿಸಬೇಕಾದ ಅಂಶಗಳ ಕುರಿತು**

1. ವಿದ್ಯಾರ್ಥಿಗಳ ಶಾಲಾ ಪ್ರವೇಶಾತಿಯನ್ನು / ದಾಖಲಾತಿಯನ್ನು ದಿನಾಂಕ: 31.05.2024 ರಿಂದ ಶಾಲಾ ಪ್ರಾರಂಭೋತ್ಸವದೊಂದಿಗೆ ಆರಂಭಿಸಿ, ದಿನಾಂಕ : 30.06.2024 ರಂದು ಮುಕ್ತಾಯಗೊಳಿಸತಕ್ಕದ್ದು
2. ಕೆಲವು ಮಕ್ಕಳು ನಿರಂತರವಾಗಿ ಶಾಲೆಗೆ ಗೈರುಹಾಜರಾಗುತ್ತಿರುವುದು ಮತ್ತು ಶಾಲೆಯನ್ನು ಅರ್ಧದಲ್ಲಿಯೇ ಬಿಡುವ ಮಕ್ಕಳನ್ನು ಕಡ್ಡಾಯವಾಗಿ ಹಾಜರಾತಿ ಅಧಿಕಾರಿಯು (ಶಿಕ್ಷಣ ಸಂಯೋಜಕರು) CRP & BRP ಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ದಾಖಲಾತಿ ಆಂದೋಲನದ ಮುಖಾಂತರ ವ್ಯಾಪಕ ಪ್ರಚಾರ ಕೈಗೊಂಡು ಶಾಲಾ ಮುಖ್ಯವಾಹಿನಿಗೆ ತರುವುದು.
3. ಕ್ರಿಸ್‌ಮಸ್ ರಜೆ ಬೇಡಿಕೆಯನ್ನು ಸಂಬಂಧಿಸಿದ ಶಿಕ್ಷಣ ಸಂಸ್ಥೆಗಳು ತಮ್ಮ ವ್ಯಾಪ್ತಿಯ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ಸಲ್ಲಿಸಿದಲ್ಲಿ ಈ ಬಗ್ಗೆ ಆಯಾ ಉಪನಿರ್ದೇಶಕರು (ಆಡಳಿತ) ರವರು ಈ ಕುರಿತು ಪರಿಶೀಲಿಸಿ ನಿರ್ಧರಿಸುವುದು. ಸದರಿ ಡಿಸೆಂಬರ್ ಮಾಹೆಯಲ್ಲಿ ನೀಡುವ ಕ್ರಿಸ್ ಮಸ್ ರಜಾ ಅವಧಿಯನ್ನು ಅಕ್ಟೋಬರ್ ಮಾಹೆಯ ಮಧ್ಯಂತರ ರಜೆಯಲ್ಲಿ ಕಡಿತಗೊಳಿಸಿ ಸರಿದೂಗಿಸಿಕೊಳ್ಳಲು ಕ್ರಮವಹಿಸತಕದ್ದು.

.................4

Scanned with ACE Scanner

4. ರಾಜ್ಯ/ಜಿಲ್ಲಾ ಕಛೇರಿಗಳಿಂದ ನಿಯೋಜಿಸಿದ ಜಿಲ್ಲಾ ಮತ್ತು ತಾಲ್ಲೂಕು ಶೈಕ್ಷಣಿಕ ಉಸ್ತುವಾರಿ/ ನೋಡಲ್ ಅಧಿಕಾರಿಗಳು, ಕ್ಲಸ್ಟರ್ ಹಂತದಲ್ಲಿ ಸಿ.ಆರ್.ಪಿಗಳು, ಬ್ಲಾಕ್ ಹಂತದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ, ಜಿಲ್ಲಾ ಹಂತದಲ್ಲಿ ಉಪನಿರ್ದೇಶಕರು (ಆಡಳಿತ) ಮತ್ತು (ಅಭಿವೃದ್ಧಿ) ರವರುಗಳು ತಮ್ಮ ತಮ್ಮ ವ್ಯಾಪ್ತಿಗನುಗುಣವಾಗಿ ಕ್ರಿಯಾಶೀಲ ಮೇಲ್ವಿಚಾರಣೆ ಮತ್ತು ಶೈಕ್ಷಣಿಕ ಉಸ್ತುವಾರಿ ಕ್ರಿಯಾ ಯೋಜನೆಯನ್ನು ಶೈಕ್ಷಣಿಕ ಮಾರ್ಗದರ್ಶಿಯಲ್ಲಿ ಸೂಚಿಸಿದಂತೆ ತಯಾರಿಸಿಕೊಂಡು ಶಾಲೆಗಳ ಪ್ರಾರಂಭ, ಪೂರ್ವ ತಯಾರಿ, ಶಾಲೆಗಳ ಪ್ರಾರಂಭದ ಸಮಯದಲ್ಲಿ ಇರುವ ಶಿಕ್ಷಕರ ಕೊರತೆ ಹಾಗೂ ಇಲಾಖಾ ಪ್ರೋತ್ಸಾಹದಾಯಕ ಯೋಜನೆಗಳಾದ ಮಧ್ಯಾಹ್ನ ಉಪಹಾರ ಯೋಜನೆ , ಸಮವಸ್ತ್ರ, ಪಠ್ಯಪುಸ್ತಕ, ಶೂ ಮತ್ತು ಸಾಕ್ಸ್ ಇತರೆ ಪ್ರೋತ್ಸಾಹಕಗಳ ವಿತರಣೆ ಹಾಗೂ ಶಾಲೆಗಳಲ್ಲಿ ಉತ್ತಮ ವಾರ್ಷಿಕ ಕ್ರಿಯಾ ಯೋಜನೆಯೊಂದಿಗೆ ಮಕ್ಕಳ ದಾಖಲಾತಿ ಅಭಿವೃದ್ಧಿಪಡಿಸಲು **ಮಿಂಚಿನ ಸಂಚಾರ** ಕೈಗೊಂಡು ಉಸ್ತುವಾರಿ ಮಾಡುವುದು.
5. ರಾಷ್ಟ್ರೀಯ ಹಬ್ಬಗಳಾದ ಗಣರಾಜ್ಯೋತ್ಸವ, ಸ್ವಾತ್ರಂತ್ರ್ಯ ದಿನಾಚರಣೆ ಹಾಗೂ ನಾಡ ಹಬ್ಬವಾದ ಕರ್ನಾಟಕ ರಾಜ್ಯೋತ್ಸವ ಮತ್ತು ಇತರೆ ಪ್ರಮುಖ ಜಯಂತಿಗಳನ್ನು ಕಡ್ಡಾಯವಾಗಿ ಆಯಾ ದಿನಗಳಂದು ಗೌರವಪೂರ್ವಕವಾಗಿ ಆಚರಿಸತಕ್ಕದ್ದು.
6. ನಿಗದಿಪಡಿಸಿದ ಶೈಕ್ಷಣಿಕ ಕರ್ತವ್ಯದ ಅವಧಿಗಳು ಕಡಿಮೆಯಾಗದಂತೆ ಮುಷ್ಕರ, ಮಳೆಗಾಗಿ ಇನ್ನಿತರೆ ಅನಿರೀಕ್ಷಿತ ಕಾರಣಗಳಿಂದಾಗಿ ಶಾಲೆಗೆ ರಜೆ ಘೋಷಣೆಯಾದಲ್ಲಿ ಆ ಅವಧಿಯ ಶಾಲಾ ಕರ್ತವ್ಯದ ದಿನಗಳನ್ನು ಮುಂದಿನ ರಜಾ ದಿನಗಳಲ್ಲಿ ಪೂರ್ಣದಿನದ ಶಾಲೆಗಳನ್ನು ನಡೆಸಿ, ಶಾಲಾ ಕರ್ತವ್ಯದ ದಿನಗಳನ್ನು ಸರಿದೂಗಿಸಿಕೊಳ್ಳಲು ಉಪನಿರ್ದೇಶಕರು/ಕ್ಷೇತ್ರ ಶಿಕ್ಷಣಾಧಿಕಾರಿಗಳು ಕ್ರಮವಹಿಸುವುದು.
7. ಪರೀಕ್ಷಾ ದಿನಗಳು, ಮೌಲ್ಯಾಂಕನ ದಿನಗಳು, ಹಾಗೂ ಪೂರಕ ಶೈಕ್ಷಣಿಕ ಚಟುವಟಿಕೆ ನಡೆಸುವ ದಿನಗಳನ್ನು ಕೂಡ ಶಾಲಾ ಕರ್ತವ್ಯದ ದಿನವೆಂದು ನಿಗದಿತ ಅವಧಿಗಳಲ್ಲಿ ಪರಿಗಣಿಸುವುದು.
8. 2024-25ನೇ ಶೈಕ್ಷಣಿಕ ಸಾಲಿಗೆ ವಾರ್ಷಿಕ ಪಠ್ಯವಸ್ತುವನ್ನು ರಾಜ್ಯಾದ್ಯಂತ ಏಕರೂಪದಲ್ಲಿ ಅಳವಡಿಸಿಕೊಳ್ಳಲು ಸಲಹಾತ್ಮಕವಾಗಿ ಮಾಹೆವಾರು, ಪಾಠ ಹಂಚಿಕೆ ಮಾಡಿ, ನಿಗದಿಪಡಿಸಿದ್ದು, ಅದರಂತೆ FA-1 FA-2 FA-3 FA-4 ಮತ್ತು SA-1 SA-2 ಪರೀಕ್ಷೆ/ಮೌಲ್ಯಾಂಕನಗಳನ್ನು ನಿಗದಿಪಡಿಸಿದ ಪಠ್ಯವಸ್ತುಗನುಗುಣವಾಗಿ ನಿರ್ವಹಿಸತಕ್ಕದ್ದು.
9. ಸದರಿ ಸುತ್ತೋಲೆಯೊಂದಿಗೆ 2024-25ನೇ ಸಾಲಿನ ವಾರ್ಷಿಕ ಶೈಕ್ಷಣಿಕ ಮಾರ್ಗಸೂಚಿಯನ್ನು ಸಿದ್ಧಪಡಿಸಿ ಪೂರೈಸಲಾಗುವುದು. ಅದರಂತೆ ಶಾಲಾ/ಕ್ಲಸ್ಟರ್/ತಾಲ್ಲೂಕು ಹಾಗೂ ಜಿಲ್ಲಾ ಹಂತಗಳಲ್ಲಿ ಕ್ರಿಯಾ ಯೋಜನೆ ರೂಪಿಸಿಕೊಂಡು ಅನುಪಾಲನೆ ಮಾಡತಕ್ಕದ್ದು.
10. ಕಳೆದ ಸಾಲಿನಲ್ಲಿ 5 ಮತ್ತು 8, 9ನೇ ತರಗತಿಗಳಿಗೆ ಮೌಲ್ಯಂಕನಾ ಕಾರ್ಯ ನಿರ್ವಹಿಸಿದ್ದು, ಪ್ರಸ್ತುತ 2024-25ನೇ ಸಾಲಿನ ಪ್ರಕ್ರಿಯೆ ನಿರ್ವಹಣೆ ಕುರಿತು ಪ್ರತ್ಯೇಕವಾಗಿ ಕ್ರಮವಹಿಸಲು ಸುತ್ತೋಲೆಯಲ್ಲಿ ತಿಳಿಸಲಾಗುವುದು.

೩೦.೨೦.೭/೨೦

**ಆಯುಕ್ತರು**

**ಶಾಲಾ ಶಿಕ್ಷಣ ಇಲಾಖೆ**

**ಇವರಿಗೆ**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು (ಅಭಿವೃದ್ಧಿ) ಶಾಲಾ ಶಿಕ್ಷಣ ಇಲಾಖೆ. ರವರಿಗೆ ಅಗತ್ಯ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಅಗತ್ಯ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ರಾಜ್ಯ ಪಠ್ಯಕ್ರಮದ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಮುಖ್ಯಸ್ಥರಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ ಅಗತ್ಯ ಕ್ರಮಕ್ಕಾಗಿ

.............5

Scanned with ACE Scanner

**ಪ್ರತಿಯನ್ನು**

1. ಮಾನ್ಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಇವರಿಗೆ ಮುಂದಿನ ಕ್ರಮಕ್ಕಾಗಿ
3. ರಾಜ್ಯ ಯೋಜನಾ ನಿರ್ದೇಶಕರು ಸಮಗ್ರ ಶಿಕ್ಷಣ ಕರ್ನಾಟಕ ಬೆಂಗಳೂರು ರವರಿಗೆ ಮಾಹಿತಿಗಾಗಿ
4. ಅಧ್ಯಕ್ಷರು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ 6ನೇ ಕ್ರಾಸ್ ಮಲ್ಲೇಶ್ವರಂ ಬೆಂಗಳೂರು ರವರಿಗೆ ಮಾಹಿತಿಗಾಗಿ
5. ನಿರ್ದೇಶಕರು ಪದವಿಪೂರ್ವ ಶಿಕ್ಷಣ ಇಲಾಖೆ 18ನೇ ಅಡ್ಡರಸ್ತೆ ಮಲ್ಲೇಶ್ವರಂ ಬೆಂಗಳೂರು ರವರಿಗೆ ಮಾಹಿತಿಗಾಗಿ
6. ಅಪರ ಆಯುಕ್ತರು ಶಾಲಾ ಶಿಕ್ಷಣ ಇಲಾಖೆ ಧಾರವಾಡ /ಕಲಬುರಗಿ.
7. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ ಮತ್ತು ಜಿಲ್ಲಾ ನೋಡಲ್ ಅಧಿಕಾರಿಗಳಿಗೆ
8. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ರವರಿಗೆ
9. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ವಿಭಾಗೀಯ ಸಹ ನಿರ್ದೇಶಕರುಗಳಿಗೆ.
10. ಸಹ ನಿರ್ದೇಶಕರು (ಶಾಲಾ ಶಿಕ್ಷಣ),ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
11. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ
12. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
13. ಕಛೇರಿ ಪ್ರತಿ

**ಆಯುಕ್ತರು**
**ಶಾಲಾ ಶಿಕ್ಷಣ ಇಲಾಖೆ**

Scanned with ACE Scanner